ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2015–16 : ದಿನಾಂಕ: 13–4–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ರಾಷ್ಟ್ರೀಯ ಅಗ್ನಿಶಾಮಕ ಸೇವಾ ಸಪ್ತಾಹ – ಸ್ಮರಣಾರ್ಥ ಕವಾಯತು:<br><br>ಅಗ್ನಿಶಾಮಕ ಸೇವಾ ಸ್ಮರಣೆ – 2015:<br><br>ಮುಖ್ಯ ಅತಿಥಿ:<br><br>ಶ್ರೀ ಬಿ. ಬಿ. ಚಂಗಪ್ಪ,<br>ನಿವೃತ್ತ ನಿರ್ದೇಶಕರು,<br>ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು<br><br>ಸೂಚನೆ: ಈ ಕಾರ್ಯಕ್ರಮಕ್ಕೆ ಪತ್ರಕರ್ತರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನವು ಅಂದು ಬೆಳಗ್ಗೆ 7–45 ಗಂಟೆಗೆ ನಗರದ ಕಬ್ಬನ್ ಉದ್ಯಾನದಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.<br><br>ಸಂಪರ್ಕ:<br><br>ಶ್ರೀ ರಮೇಶ್,<br><br>ಮೊ ಸಂಖ್ಯೆ: 9900848602 | 14–04–2015<br>ಮಂಗಳವಾರ<br>ಬೆಳಗ್ಗೆ<br>9–00 ಗಂಟೆಗೆ | ಆರ್.ಎ. ಮುಂಡ್ಕೂರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿ,<br>ಬನ್ನೇರುಘಟ್ಟ ರಸ್ತೆ,<br>ಬೆಂಗಳೂರು – 560 029 |

| | | | |
|---|---|---|---|
| 2. | ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆಗೆ ಮಾಲಾರ್ಪಣೆ.<br><br><u>ಮಾಲಾರ್ಪಣೆ:</u><br><br>ಶ್ರೀ ಸಿದ್ಧರಾಮಯ್ಯ,<br>ಮುಖ್ಯಮಂತ್ರಿಗಳು<br><br>ಡಾ. ಬಿ. ಆರ್. ಅಂಬೇಡ್ಕರ್ ರವರ 124ನೇ ಜನ್ಮ ದಿನಚರಣೆ ಪ್ರಶಸ್ತಿ ಪ್ರದಾನ ಸಮಾರಂಭ<br><br>ಉದ್ಘಾಟನೆ:<br><br>ಶ್ರೀ ಸಿದ್ಧರಾಮಯ್ಯ,<br>ಮುಖ್ಯಮಂತ್ರಿಗಳು<br><br>ಅಧ್ಯಕ್ಷತೆ:<br><br>ಶ್ರೀ ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.<br><br>ಉಪನ್ಯಾಸ:<br><br>ಡಾ. ಸಿದ್ಧಲಿಂಗಯ್ಯ,<br>ಖ್ಯಾತ ಸಾಹಿತಿಗಳು, ಬೆಂಗಳೂರು | 14-04-2015<br>ಮಂಗಳವಾರ<br>ಬೆಳಗ್ಗೆ<br>9-30 ಗಂಟೆಗೆ<br><br>ಸಂಜೆ<br>4-00 ಗಂಟೆಗೆ | ಡಾ. ಬಿ.ಆರ್. ಅಂಬೇಡ್ಕರ್ ರವರ ಪ್ರತಿಮೆ, ವಿಧಾನಸೌಧ, ಬೆಂಗಳೂರು.<br><br>ಬ್ಯಾಂಕ್ವೆಟ್ ಹಾಲ್<br>ವಿಧಾನಸೌಧ,<br>ಬೆಂಗಳೂರು |
| 3. | ಕಾನೂನು ಮಾಪನ ಶಾಸ್ತ್ರ ಇಲಾಖೆಯ 'ಇ-ಮಾಪನ' ಚಾಲನಾ ಕಾರ್ಯಕ್ರಮ ಹಾಗೂ ಪತ್ರಿಕಾಗೋಷ್ಠಿ.<br><br>ಶ್ರೀ ದಿನೇಶ್ ಗುಂಡೂರಾವ್,<br>ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು. | 15-04-2015<br>ಬುಧವಾರ<br>ಸಂಜೆ<br>4-30 ಗಂಟೆಗೆ | ಕೊಠಡಿ ಸಂಖ್ಯೆ, 222,<br>2ನೇ ಮಹಡಿ, ವಿಕಾಸಸೌಧ,<br>ಬೆಂಗಳೂರು |
| 4. | ನ್ಯಾಯಾಧೀಶರ ಅಧಿಕಾರ ಪ್ರಮಾಣ ವಚನ ಸ್ವೀಕಾರ ಸಮಾರಂಭ:<br><br><u>ಪ್ರಮಾಣ ವಚನ ಬೋಧಿಸುವವರು:</u><br><br>ಶ್ರೀ ವಜೂಭಾಯಿ ವಾಲಾ, | 15-04-2015<br>ಬುಧವಾರ<br>ಸಂಜೆ<br>6-00 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ರಾಜಭವನ,<br>ಬೆಂಗಳೂರು |

| | | | |
|---|---|---|---|
| | ರಾಜ್ಯಪಾಲರು,<br>ಕರ್ನಾಟಕ ಸರ್ಕಾರ<br><br><u>ಸ್ವೀಕರಿಸುವವರು:</u><br><br>ಶ್ರೀ ಸುಭ್ರೋ ಕಮಲ್ ಮುಖರ್ಜಿ,<br>ಕರ್ನಾಟಕ ಉಚ್ಚ ನ್ಯಾಯಾಲಯದ<br>ಗೌರವಾನ್ವಿತ ನ್ಯಾಯಮೂರ್ತಿಯಾಗಿ | | |

ನಿರ್ದೇಶಕರ ಪರವಾಗಿ

## <u>ಪತ್ರಿಕಾ ಪ್ರಕಟಣೆ</u>

# <u>ಡಾ: ಎಸ್.ಎಸ್. ಅರಕೇರಿ ಅವರಿಗೆ ಅಂಬೇಡ್ಕರ್ ಪ್ರಶಸ್ತಿ</u>

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ದಲಿತ ಸಮುದಾಯದ ಸಮಗ್ರ ಅಭಿವೃದ್ಧಿಗೆ ಹಾಗೂ ಡಾ: ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ನಾಡಿಗೆ ಪರಿಚಯಿಸುವಲ್ಲಿ ತಮ್ಮನ್ನು ತಾವೇ ತೊಡಗಿಸಿಕೊಂಡಿದ್ದ ಅವರ ಹತ್ತಿರದ ಒಳನಾಡಿ ಬುದ್ಧ, ಬಸವ ಹಾಗೂ ಡಾ: ಅಂಬೇಡ್ಕರ್ ತತ್ವರಾದಕರೂ ಆದ ಡಾ: ಎಸ್.ಎಸ್. ಅರಕೇರಿ ಅವರನ್ನು ಡಾ: ಅಂಬೇಡ್ಕರ್ ಅವರ 124 ನೇ ಜಯಂತೋತ್ಸವದ ಪ್ರಶಸ್ತಿಗಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಆಯ್ಕೆ ಸಮಿತಿಯ ಅಧ್ಯಕ್ಷ ಡಾ: ಸಿದ್ದಲಿಂಗಯ್ಯ ಅವರು ತಿಳಿಸಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಪತ್ರಕರ್ತರನ್ನು ಉದ್ದೇಶಿಸಿ ಮಾತನಾಡಿದ ಡಾ: ಸಿದ್ದಲಿಂಗಯ್ಯ ಅವರು ಆಯ್ಕೆ ಸಮಿತಿಯ ಮುಂದೆ ಸುಮಾರು 51 ಅರ್ಜಿಗಳು ಬಂದಿದ್ದು ಈ ಸಂಬಂಧ ನಡೆಸಲಾದ ಎರಡು ಸಭೆಗಳಲ್ಲಿ ಸದಸ್ಯರ ಸರ್ವಾನುಮತದ ಅಭಿಪ್ರಾಯದಂತೆ ಅರಕೇರಿ ಅವರನ್ನು ಆಯ್ಕೆ ಮಾಡಲಾಯಿತು ಎಂದರು.

ಆಯ್ಕೆ ಪ್ರಕ್ರಿಯೆಯು ಪಾರದರ್ಶಕವಾಗಿ ನಡೆದಿದ್ದು ಸರ್ಕಾರದಿಂದ ಯಾವುದೇ ರೀತಿಯ ಒತ್ತಡಗಳು ಅಥವಾ ಹಸ್ತಕ್ಷೇಪ ಇರಲಿಲ್ಲ. ಈ ಸಂದರ್ಭದಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ ಅವರು ಅರಕೇರಿ ಅವರು ಅಂಬೇಡ್ಕರ್ ಅನುಯಾಯಿಗಳು ಅವರ ಜೊತೆಯಲ್ಲೇ ಇದ್ದು ಅವರ ಹೋರಾಟದಲ್ಲಿ ಪಾಲ್ಗೊಂಡು ಶೋಷಿತರ ದನಿಯಾಗಿ ಕೆಲಸ ಮಾಡಿದ್ದಾರೆ ಎಂದರು.

ನಾಳೆ ನಡೆಯುವ ಅಂಬೇಡ್ಕರ್ ಜನ್ಮದಿನಾಚರಣೆಯಲ್ಲಿ ಡಾ: ಎಸ್.ಎಸ್. ಅರಕೇರಿ ಅವರಿಗೆ ರಾಜ್ಯದ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಿದ್ದಾರೆ ಎಂದರು. ಈ ಸಾಲಿನಿಂದ

ಒಬ್ಬರಿಗೆ ಮಾತ್ರ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು ಪ್ರಶಸ್ತಿ ಮೊತ್ತವು 5.00 ಲಕ್ಷ ರೂ. ಗಳಾಗಿದ್ದು ಬಂಗಾರದ ಪದಕವನ್ನು ಕೂಡ ನೀಡಿ ಗೌರವಿಸಲಾಗುತ್ತಿದೆ ಎಂದರು.

ಆಯ್ಕೆ ಸಮಿತಿಯ ಸದಸ್ಯರಾದ ಲಕ್ಷ್ಮೀನಾರಾಯಣ ನಾಗವಾರ, ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಾದ ಮಂಜುನಾಥ ಪ್ರಸಾದ್, ಆಯುಕ್ತರಾದ ಶ್ರೀಮತಿ ಸಾವಿತ್ರಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

2015 ನೇ ಮೇ 2 ರಿಂದ 2016 ನೇ ಸಾಲಿನ ಫೆಬ್ರವರಿ 29 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಇಲ್ಲಿ 10 ತಿಂಗಳ ಅವಧಿಯ ತೋಟಗಾರಿಕೆ ತರಬೇತಿಗೆ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಈ ಅವಧಿಯಲ್ಲಿ ತರಬೇತಿಗೆ ಮಾಸಿಕ ರೂ. 1000/- ಶಿಷ್ಯವೇತನ ನೀಡಲಾಗುವುದು. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ವಾಸವಾಗಿರುವವರು ಮಾತ್ರ ಅರ್ಜಿ ಹಾಕಲು ಅರ್ಹರಾಗಿರುತ್ತಾರೆ.

ಅರ್ಜಿಗಳನ್ನು ಆಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು(ಜಿಪಂ)/ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ರಾವ)ಅಥವಾ ಇಲಾಖೆ ವೆಬ್ ಸೈಟ್ www.horticulture.kar.nic.in ನಲ್ಲಿ ಏಪ್ರಿಲ್ 25 ರೊಳಗೆ ಪಡೆಯಬಹುದಾಗಿದೆ. ಅಭ್ಯರ್ಥಿಗಳನ್ನು ಏಪ್ರಿಲ್ 28 ರಂದು ನಡೆಯುವ ಸಂದರ್ಶನ ಮೂಲಕ ಆಯ್ಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಈ ಕೆಳಕಂಡ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ. ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ಗ್ರಾಮಾಂತರ- 080 – 22862206, ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ನಗರ – 080-22860640, ತೋಟಗಾರಿಕೆ ಉಪ ನಿರ್ದೇಶಕರು, ರಾಮನಗರ – 080-27204327, ತೋಟಗಾರಿಕೆ ಉಪ ನಿರ್ದೇಶಕರು, ಕೋಲಾರ 08152-226940, 226941, 222161, ತೋಟಗಾರಿಕೆ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ 08156-272027, 272217, ತೋಟಗಾರಿಕೆ ಉಪ ನಿರ್ದೇಶಕರು, ತುಮಕೂರು – 0816 – 2275189, ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು – 080-26564538.

ಎಂಆರ್‌ಎಂ::ಜಿಪಿಆರ್.

## ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ

**ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)**

**ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ, ಬೆಂಗಳೂರು ಇವರ ನಿರ್ದೇಶಕ ಮಂಡಳಿಯ ಅವಧಿಯೊಂದಿಗೆ ಸಹವ್ಯಾಪ್ತವಾಗುವಂತೆ ಶ್ರೀ ಭೀಮಪ್ಪ ತಿಮ್ಮಣ್ಣ ಬೆನಕಟ್ಟಿ ಅವರು ಏಪ್ರಿಲ್ 9 ರಂದು ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ ಎಂದು ಮಂಡಳಿಯ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

ಎಂಆರ್‌ಎಂ::ಜಿಪಿಆರ್.

## ಸಚಿವರ ಪ್ರವಾಸ

**ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)**

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವೆ ಶ್ರೀಮತಿ ಉಮಾಶ್ರೀ ಅವರು ಏಪ್ರಿಲ್ 13 ಮತ್ತು 14 ರಂದು ಬಾಗಲಕೋಟೆ ಹಾಗೂ ಬೀದರ್ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಏಪ್ರಿಲ್ 15 ರಂದು ನಗರಕ್ಕೆ ಹಿಂದಿರುಗಲಿದ್ದಾರೆ.**

ಎಂಆರ್‌ಎಂ::ಜಿಪಿಆರ್.